13/12/2024
STD

# ಕರ್ನಾಟಕ ವಿಧಾನ ಪರಿಷತ್ತು

(7)

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 567

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 13.12.2024

ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಅಂಗವಿಕಲರ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ-2016ರ ಸೆಕ್ಷನ್ 37ರ ರೀತ್ಯಾ ಸರ್ಕಾರದ ಎಲ್ಲಾ ಇಲಾಖೆಗಳ ತನ್ನ ಅಭಿವೃದ್ಧಿ ಯೋಜನೆಯ ಒಟ್ಟು ಆಯವ್ಯಯದಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಶೇ. 5 ರಷ್ಟು ಮೀಸಲಾತಿ ನೀಡಿದೆಯೇ (ವಿವಗಳೊಂದಿಗೆ ಮಾಹಿತಿ ಒದಗಿಸುವುದು) | ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು ತನ್ನ ಎಲ್ಲಾ ಕಾರ್ಯಕ್ರಮಗಳನ್ನು ರಾಜ್ಯದ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಅಭಿವೃದ್ಧಿಗೆ ಮಾತ್ರ ಅನುಷ್ಠಾನಗೊಳಿಸುತ್ತಿದೆ. ಆದ್ದರಿಂದ ಪ್ರತ್ಯೇಕ ಮೀಸಲಾತಿ ಪ್ರಶ್ನೆ ಈ ಇಲಾಖೆಗೆ ಅನ್ವಯಿಸುವುದಿಲ್ಲ ಎಂಬ ಮಾಹಿತಿಯನ್ನು ಸಲ್ಲಿಸಿದೆ.<br><br>ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016ರ ಸೆಕ್ಷನ್ 37ರ ರೀತ್ಯಾ ಅಭಿವೃದ್ಧಿ ಯೋಜನೆ ಮತ್ತು ಕಾರ್ಯಕ್ರಮಗಳಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಶೇ.5 ರಷ್ಟು ಆಯವ್ಯಯ ಮೀಸಲಿರಿಸಿ ವಿಕಲಚೇತನರ ಅಭಿವೃದ್ಧಿ ಯೋಜನೆಗಳನ್ನು ರೂಪಿಸಿ ಕ್ರಮವಹಿಸಲು ಕೋರಿ ವಿವಿಧ ಇಲಾಖೆಗಳಿಗೆ ಪತ್ರಿಸಲಾಗಿರುತ್ತದೆ. |
| ಆ | ಅಂಗವಿಕಲರ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ-2016ರ ಸೆಕ್ಷನ್ 37ರ ರೀತ್ಯಾ ಯಾವ ಯಾವ ಇಲಾಖೆಗಳ ಶೇ.5 ರಷ್ಟು ಮೊತ್ತವನ್ನು ವಿಕಲಚೇತನ ವ್ಯಕ್ತಿಗಳಿಗೆ ಮೀಸಲಿಟ್ಟಿವೆ; ಮೀಸಲಿಟ್ಟಿರುವ ಅನುದಾನವನ್ನು ವಿಕಲಚೇತನ ವ್ಯಕ್ತಿಗಳ ಅಭಿವೃದ್ಧಿಗೆ ಉಪಯೋಗಿಸಲು ಅಳವಡಿಸಿಕೊಂಡಿರುವ ಮಾನದಂಡಗಳೇನು; (ಇಲಾಖಾವಾರು ಮಾಹಿತಿ ನೀಡುವುದು) | ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು ಸರ್ಕಾರಿ ಮಾರ್ಗ ಸೂಚಿಯಂತೆ ವಿಕಲಚೇತನರ ಕಾರ್ಯಕ್ರಮ ಗಳನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸುತ್ತಿದೆ. ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ-2016ರ ಸೆಕ್ಷನ್ 37 ಬಿ ರೀತ್ಯಾ ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು ತನ್ನ ಅಭಿವೃದ್ಧಿ ಯೋಜನೆ / ಕಾರ್ಯಕ್ರಮಗಳಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಶೇ. 5ರಷ್ಟು ಮೀಸಲಾತಿ ಕಲ್ಪಿಸಬೇಕಾಗಿದ್ದು, ಆಯಾ ಇಲಾಖೆಗಳು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಮಾನದಂಡಗಳನ್ನು ಅನುಸರಿಸಿ, ವಿಕಲಚೇತನ ವ್ಯಕ್ತಿಗಳಿಗೆ ಶೇ.5ರಷ್ಟು ಮೀಸಲಾತಿ ಕಲ್ಪಿಸಲು ಸಂಬಂಧಿಸಿದ ಇಲಾಖೆಗಳನ್ನು ಕೋರಲಾಗಿರುತ್ತದೆ. |

| | | |
|---|---|---|
| ಇ | ಈ ರೀತಿ ಮೀಸಲಾತಿ ನೀಡದೇ ಇದ್ದಲ್ಲಿ ವಿಕಲಚೇತನ ವ್ಯಕ್ತಿಗಳ ಹಕ್ಕುಗಳನ್ನು ನಿರ್ಲಕ್ಷಿಸಿದಂತಾಗುವುದಿಲ್ಲವೇ; | ಈ ಬಗ್ಗೆ ಈಗಾಗಲೇ ಎಲ್ಲಾ ಇಲಾಖೆಗಳಿಗೂ ಪತ್ರ ಬರೆದು ಆಯಾ ಇಲಾಖೆಗಳು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಮಾನದಂಡಗಳನ್ನು ಅನುಸರಿಸಿ ವಿಕಲಚೇತನ ವ್ಯಕ್ತಿಗಳಿಗೆ ಶೇ.5ರಷ್ಟು ಮೀಸಲಾತಿ ಕಲ್ಪಿಸಲು ಕೋರಲಾಗಿರುತ್ತದೆ. ಎಲ್ಲಾ ಇಲಾಖೆಗಳ SCSP/TSP ಘಟಕಗಳಿಗೆ ಪ್ರತ್ಯೇಕವಾಗಿ 422/423 Objective Code ರಡಿ ಆಯವ್ಯಯವನ್ನು ನಿಗದಿಪಡಿಸಲಾಗುತ್ತಿದ್ದು, ಅದೇ ಮಾದರಿಯನ್ನು ಆಯವ್ಯಯದಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಶೇ. 5 ರಷ್ಟು ಮೀಸಲಾತಿ ನೀಡುವ ಕುರಿತಂತೆ ಅನುಸರಿಸಲಾಗುವುದು. |
| ಈ | ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ತೀರ್ಮಾನಿಸುವ ಅವಶ್ಯಕತೆ ಇದೆಯೇ; ಇದಕ್ಕೆ ಯಾವುದೇ ಆರ್ಥಿಕ ಹೊರೆ ಇಲ್ಲದೆ ಇರುವುದರಿಂದ ಇಲಾಖೆಯ ಆದೇಶ ಹೊರಡಿಸಿ ಕ್ರಮ ಕೈಗೊಂಡು ಈ ಮೀಸಲಾತಿ ಆಯವ್ಯಯವನ್ನು ವಿಕಲಚೇತನ ವ್ಯಕ್ತಿಗಳ ಅಭಿವೃದ್ಧಿಗೆ ಉಪಯೋಗಿಸಲು ಮಾರ್ಗಸೂಚಿಗಳನ್ನು ರಚಿಸಲು ಸಾಧ್ಯವಿಲ್ಲವೆ? (ಮಾಹಿತಿ ಒದಗಿಸುವುದು) | ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ-2016ರ ಸೆಕ್ಷನ್ 37 ರ ರೀತ್ಯಾ "ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಅಭಿವೃದ್ಧಿ ಯೋಜನೆಗಳಲ್ಲಿ ಅಂಗವಿಕಲರ ಕಲ್ಯಾಣಕ್ಕಾಗಿ ಪ್ರತ್ಯೇಕವಾಗಿ ಉಪಲೆಕ್ಕಶೀರ್ಷಿಕೆಯನ್ನು ಸೃಜಿಸಿ ಶೇ.5 ರಷ್ಟು ಆಯವ್ಯಯ ಮೀಸಲಿಡುವ ಬಗ್ಗೆ" ಸಚಿವ ಸಂಪುಟದ ಅನುಮೋದನೆ ಪಡೆಯಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ಮಮಇ 293 ಪಿಹೆಚ್‌ಪಿ 2024**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು.